



ಅರುಣ ಪಿ. ಭಟ್ಟ

## ವಾರಭವಿಷ್ಯ: 11.12.2025ರಿಂದ 17.12.2025ರವರೆಗೆ





ಶ್ರಮದ ಕೆಲಸಗಳಿಂದ ಸಾರ್ಥಕ ಭಾವನೆ ನಿಮ್ಮಲ್ಲಿ ಕಾಣಬಹುದು. ನಿಮ್ಮ ಗೌರವ ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಬಾಕಿ ಇರುವ ಹಲವು ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಪೋಷಕರ ಸಂತೋಷಕ್ಕೆ ನೀವು ಕಾರಣರಾಗುತ್ತೀರಿ. ಕೌಟುಂಬಿಕವಾಗಿ ನೆಮ್ಮದಿಯಾಗಿ ಇರುತ್ತೀರಿ. ಶುಭದಿನ: 16. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---




ನೀವು ಮಾಡುವ ಕೆಲಸದಲ್ಲಿ ಉತ್ತಮ ಫಲಿತಾಂಶ ಸಿಗಲಿದೆ. ನೀವು ಒಬ್ಬರಿಗೆ ಒಳ್ಳೆಯದು ಬಯಸಿದರೆ ಅಪಾರ್ಥ ಮಾಡಿಕೊಳ್ಳಬಹುದು. ಬುದ್ಧಿವಾದ ಹೇಳುವ ಮೊದಲು ವ್ಯಕ್ತಿ ಕೇಳುಗನಾಗಿದ್ದಾನೆಯೇ ಎಂಬುದನ್ನು ಅರಿತುಕೊಳ್ಳಿ. ವಾರವಿಡೀ ನಿಮ್ಮ ಮೇಲಧಿಕಾರಿಗಳ ಇಲ್ಲವೇ ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ. ಮಂಗಳ ಕಾರ್ಯದಲ್ಲಿ ಭಾಗಿಯಾಗುವಿರಿ. ಶುಭದಿನ: 12. ಆದಿತ್ಯ ಹೃದಯ ಪಠಿಸಿರಿ.

---




ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ಕೆಲವು ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ. ಕೆಲಸದ ಸಮಯದಲ್ಲಿ ವಿಶೇಷ ಯಶಸ್ಸನ್ನು ಪಡೆಯುತ್ತೀರಿ. ಒಬ್ಬ ಹಿರಿಯ ಅಧಿಕಾರಿ ನಿಮ್ಮನ್ನು ಬೆಂಬಲಿಸುತ್ತಾರೆ. ಸ್ನೇಹಿತರ ಬೆಂಬಲ ನಿಮಗೆ ದೊರೆಯುವುದು. ಹಣಕಾಸಿನ ಸ್ಥಿತಿ ಉತ್ತಮವಾಗಿರುವುದು. ಶುಭದಿನ: 16. ಸೌಂದರ್ಯ ಲಹರಿ ಪಠಿಸಿರಿ.

---





ಮಾಡುವ ಕೆಲಸದಲ್ಲಿ ಅನಗತ್ಯ ತೊಂದರೆ ಬರಬಹುದು. ಸಾಲ ವಸೂಲಾತಿಯಲ್ಲಿ ನಿಮ್ಮ ನಿರೀಕ್ಷೆಯಲ್ಲಿ ಹುಸಿಯಾಗಲಿದೆ. ಆರ್ಥಿಕ ಮೂಲಗಳು ತಡೆಯಾಗುವ ಸಾಧ್ಯತೆ ಇದೆ. ನಿಮ್ಮ ಬುದ್ಧಿ ಬಲದಿಂದ ಪದೋನ್ನತಿ ಸಿಗುವುದು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಓದು ಮುಂದುವರಿಸಲಿದ್ದೀರಿ. ವಿರೋಧಿಸುವ ಜನ ಎದುರಾಗುತ್ತಾರೆ. ಅವರ ಟೀಕೆಗಳಿಗೆ ಕಿವಿಗೊಡದಿರಿ. ಶುಭದಿನ: 15. ಕಾಲಭೈರವನ ಆರಾಧನೆ ಮಾಡಿರಿ.

---





ಹೂಡಿಕೆಗಳಿಂದ ಧನ ನಷ್ಟ ಆಗುವ ಸಂಭವ ಇದೆ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದವು ಅತಿಶಯೋಕ್ತಿಯಾಬಹುದು. ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ನಿಮ್ಮ ಮಕ್ಕಳ ಮೇಲೆ ಇಟ್ಟಿರುವ ಭರವಸೆ ಕಾರ್ಯರೂಪಕ್ಕೆ ಬರುವುದು. ಸಾಲದ ತೀರುವಳಿ ಮಾಡಿದಲ್ಲಿ ಅನುಕೂಲವಾಗುವುದು. ನೀವು ಪುರಸ್ಕಾರವನ್ನೂ ಪಡೆಯುತ್ತೀರಿ. ಶುಭದಿನ: 14. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ

---




ಹಿರಿಯರ ಬಗ್ಗೆ ಗೌರವ ನೀಡುವುದು ಒಳ್ಳೆಯದು. ಉತ್ತಮ ಆರ್ಥಿಕ ಗಳಿಕೆ ಇದ್ದರೂ ದುಡುಕುತನ ದೊಡ್ಡಪೆಟ್ಟನ್ನು ನೀಡಬಹುದಾಗಿದೆ. ಮನಸ್ಸು ಮರ್ಕಟವಿದ್ದಂತೆ ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ದೊಡ್ಡ ಯೋಜನೆಯೊಂದು ನಿಮ್ಮ ಬುದ್ಧಿ ಕೌಶಲ್ಯಕ್ಕೆ ಎದುರಾಗುವುದು. ಉದ್ಯೋಗದಲ್ಲಿ ಬದಲಾವಣೆ ಬಡ್ತಿ ಸಂಭವ. ಶುಭದಿನ: 16. ಹನುಮಾನ್ ಚಾಲೀಸ್ ಪಠಿಸಿರಿ.

---





ಕೆಲಸದಲ್ಲಿ ಹೆಚ್ಚಿನ ವಿಳಂಬ. ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ ಇದೆ. ಟೀಕಿಸುವಂತಹ ಜನರ ಕುರಿತು ಆತಂಕ ಪಡಬೇಕಾಗಿಲ್ಲ. ನಿಮ್ಮ ಸುತ್ತಮುತ್ತಲ ಜನರೇ ನಿಮ್ಮನ್ನು ಅಡ್ಡಹಾದಿಗೆ ಎಳೆಯುತ್ತಿರುವರು. ಆ ಬಗ್ಗೆ ಎಚ್ಚರದಿಂದಿರಿ. ಶುಭದಿನ: 17. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.

---




ಆರ್ಥಿಕವಾಗಿ ಸಾಧಿಸುವಿರಿ. ರಾಜಿ ಪಂಚಾಯಿತಿಗಳಿಗೆ ಹೋಗದಿರುವುದು ತುಂಬಾ ಸೂಕ್ತ. ಸಂಗಾತಿಯ ಜೊತೆಗೆ ವಸ್ತುಗಳನ್ನು ಖರೀದಿ ಪ್ರಕ್ರಿಯೆಗಳನ್ನು ಮಾಡಲು ಇಚ್ಛಿಸುತ್ತೀರಿ. ಮುಷ್ಟಿ ಕಾಳು ಚೆಲ್ಲಿ ಮೂಟೆ ಕಾಳನ್ನು ಪಡೆಯುವಂತೆ ಹಣ ಖರ್ಚಾಗುವುದು. ಅತಿಯಾದ ಮಾನಸಿಕ ಸಮಸ್ಯೆಯನ್ನು ದೂರವಿಡಿ. ವಾರದ ಕೊನೆಯಲ್ಲಿ ಒಳಿತಾಗುವುದು. ಶುಭದಿನ: 14. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.

---





ನಿಮ್ಮ ಸಾಮರ್ಥ್ಯವನ್ನು ಸಂಪೂರ್ಣ ಬಳಸಿಕೊಳ್ಳುತ್ತೀರಿ. ಸಾಮಾಜಿಕ ಸ್ಥಾನಮಾನದಲ್ಲಿ ಏರಿಕೆ ಆಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ದೈಹಿಕ ನೋವುಗಳು ಕಾಡುತ್ತವೆ. ಸಂಬಂಧಿಕರ ಜತೆ ಅನಗತ್ಯ ವಿವಾದಗಳು ಆಗುತ್ತವೆ. ಮಾನಸಿಕ ಸಮತೋಲನವನ್ನು ಕಾಪಾಡಿಕೊಳ್ಳಿ. ಮನೆಗೆ ಸಂಬಂಧಿತ ಕೆಲವು ದಾಖಲೆಗಳನ್ನು ಗಮನವಿಟ್ಟು ಕಾಪಾಡಿ. ಶುಭದಿನ: 16. ಚಂಡಿ ಪಾರಾಯಣ ಮಾಡಿರಿ.

---




ಹೊಸ ಯೋಜನೆಗೆ ಈ ವಾರ ಸಿದ್ಧತೆ ನಡೆಸುವುದು ಒಳ್ಳೆಯದು. ಕೃಷಿ ಚಟುವಟಿಕೆಗಳಲ್ಲಿ ಉತ್ತಮ ಬೆಳವಣಿಗೆ ಕಂಡುಬರುತ್ತದೆ. ಆರ್ಥಿಕ ಸಹಕಾರಕ್ಕಾಗಿ ಸಾಲ ಕೇಳುವ ಸಾಧ್ಯತೆ ಇದೆ. ಉತ್ತಮ ವ್ಯವಹಾರ ನಡೆಸುವ ಸಾಧ್ಯತೆ ಕಂಡುಬರುತ್ತದೆ. ಅತ್ಯಂತ ಚುರುಕುತನದಿಂದ ಮಾಡಿದ ಕೆಲಸ ಕಾರ್ಯಗಳಲ್ಲಿಯೂ ಹಿನ್ನಡೆಯನ್ನು ಅನುಭವಿಸಬೇಕಾಗುವುದು. ಶುಭದಿನ: 14. ಮಾರುತಿ ಉಪಾಸನೆ ಪೂಜೆ ಮಾಡಿರಿ.

---




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಕುಟುಂಬದಲ್ಲಿ ಅನಿರೀಕ್ಷಿತ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ನಿಮ್ಮ ನಡತೆ ಹೆಚ್ಚು ಪ್ರಶಂಸೆಗೆ ಒಳಪಡುವುದು. ಶುಭದಿನ: 15. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿವೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತವೆ. ನಿಮ್ಮ ಕ್ರಿಯಾಶೀಲತೆಯಿಂದ ಹೊಸತಾದ ಕಲ್ಪನೆಗಳೊಂದಿಗೆ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ. ವ್ಯವಹಾರದಲ್ಲಿ ನಿಮಗೆ ಒಳ್ಳೆಯ ಪ್ರಶಂಸೆ ಸಿಗಲಿದೆ. ಕಲಾವಿದರಿಗೆ ದೊಡ್ಡ ಯಶಸ್ಸು. ಪ್ರೇಮಿಗಳಿಗೆ ವಿವಾಹ ಭಾಗ್ಯ. ಅನಿರೀಕ್ಷಿತ ದೂರ ಪ್ರವಾಸ. ಶುಭದಿನ: 16. ವಿಷ್ಣು ಸಹಸ್ರನಾಮ ಮಾಡಿರಿ.